(23)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿರುವ ಅಲೆಮಾರಿ ಜನಾಂಗದವರಿಗೆ ಸೌಲಭ್ಯ ಹಾಗೂ ಮೀಸಲಾತಿ ಕಲ್ಪಿಸುವಲ್ಲಿ ರಾಜ್ಯ ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಲಹಾ ಸಮಿತಿಯ ಅವಧಿಯನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಸಕಇ 127 ಬಿಸಿಎ 2005, ದಿ:5-6-2006.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 30 ಬಿಸಿಎ 2010, ದಿ;24-02-2010.
3) ಪತ್ರ ಸಂಖ್ಯೆ:ಬಿಸಿಎಂ/ಅಮಾಜ-1/ಸಿಆರ್-2/2012-13,ದಿ:13-06-2012.ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು. ಇವರಿಂದ

ಮೇಲೆ ಓದಲಾದ ಉಲ್ಲೇಖ (1)ರಲ್ಲಿ ದಿನಾಂಕ:05-06-2006ರ ಸರ್ಕಾರದ ಆದೇಶದಲ್ಲಿ, ರಾಜ್ಯದ ಅಲೆಮಾರಿ ಜನಾಂಗದವರಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಹಾಗೂ ರಾಜ್ಯ ಮಾನವ ಹಕ್ಕುಗಳ ಆಯೋಗದ ಶಿಫಾರಸ್ಸಿನ ಅನುಸಾರ, ಮೀಸಲಾತಿ ಸೌಲಭ್ಯ ಹಾಗೂ ಕೇಂದ್ರ ಸರ್ಕಾರದ ಆರ್ಥಿಕ ನೆರವಿನೊಂದಿಗೆ ಅಲೆಮಾರಿ ಜನಾಂಗದ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಲು, ಗ್ರಾಮೀಣ ಪ್ರದೇಶದಲ್ಲಿರುವ ಅಲೆಮಾರಿ ಜನಾಂಗದವರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಸಮಾನ ಅವಕಾಶ ಕಲ್ಪಿಸಲು ಸಹಕಾರಿಯಾಗುವಂತೆ ದಿನಾಂಕ:05.06.2006ರಿಂದ ಅನ್ವಯವಾಗುವಂತೆ ಮೂರು ವರ್ಷಗಳ ಅವಧಿಗೆ ರಾಜ್ಯ ಮತ್ತು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದ ಅಲೆಮಾರಿ ಜನಾಂಗದವರ ಸಲಹಾ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ ಓದಲಾದ ಉಲ್ಲೇಖ(2)ರಲ್ಲಿ ದಿನಾಂಕ:24-02-2010ರ ಸರ್ಕಾರದ ಆದೇಶದಲ್ಲಿ ರಾಜ್ಯ ಮತ್ತು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದ ಅಲೆಮಾರಿ ಜನಾಂಗದವರ ಸಲಹಾ ಸಮಿತಿಯನ್ನು ದಿ:05-06-2009ರಿಂದ ಅನ್ವಯವಾಗುವಂತೆ ಮೂರು ವರ್ಷಗಳ ಅವಧಿಗೆ ರಚಿಸಲಾಗಿತ್ತು.

ಮೇಲೆ ಓದಲಾದ ಉಲ್ಲೇಖ(3)ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ತಮ್ಮ ದಿನಾಂಕ:13-06-2012ರ ಪತ್ರದಲ್ಲಿ ರಾಜ್ಯ ಮತ್ತು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದ ಅಲೆಮಾರಿ ಜನಾಂಗದವರ ಸಲಹಾ ಸಮಿತಿಯನ್ನು ನೇಮಕ ಮಾಡಿ ದಿನಾಂಕ:05-06-2012ನೇ ಸಾಲಿಗೆ ಮೂರು ವರ್ಷಗಳು ಮುಗಿಯುವುದರಿಂದ ದಿನಾಂಕ:06-06-2012ರಿಂದ ಅನ್ವಯವಾಗುವಂತೆ ಮೂರು ವರ್ಷಗಳ ಅವಧಿಗೆ ವಿಸ್ತರಣೆ ಮಾಡಿ ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಹಿಂವಕ 209 ಬಿಸಿಎ 2012,
### ಬೆಂಗಳೂರು ದಿನಾಂಕ: 19-10-2012

ಸರ್ಕಾರದ ಆದೇಶ ಸಂಖ್ಯೆ: ಸಕಇ 30 ಬಿಸಿಎ 2010, ದಿನಾಂಕ:24-2-2010ರಲ್ಲಿ ರಚಿಸಲಾಗಿದ್ದ ರಾಜ್ಯ ಮತ್ತು ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದ ಅಲೆಮಾರಿ ಜನಾಂಗದವರ ಸಲಹಾ ಸಮಿತಿಯನ್ನು ದಿನಾಂಕ:06-06-2012ರಿಂದ ಅನ್ವಯವಾಗುವಂತೆ ಮೂರು ವರ್ಷಗಳ ಅವಧಿಗೆ ವಿಸ್ತರಣೆ ಮಾಡಿ ಸರ್ಕಾರವು ಆದೇಶಿಸಿದೆ. ಉಳಿದಂತೆ ದಿನಾಂಕ:24-02-2010ರ ಆದೇಶದಲ್ಲಿರುವ ನಿಬಂಧನೆ ಮತ್ತು ಷರತ್ತುಗಳು ಮುಂದುವರೆದ ಅವಧಿಗೂ ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ನಿರ್ದೇಶಕರ ಕಛೇರಿ
ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ ಹಾಗೂ ಪ್ರಕಟಿತ 200 ಪ್ರತಿಗಳನ್ನು ಸರ್ಕಾರದ ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

ಪ್ರತಿ:

1) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು-1
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು-1
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ದೇವರಾಜ ಅರಸು ಸಂಶೋಧನಾ ಸಂಸ್ಥೆ, ಬೆಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
8) ಕಾರ್ಯದರ್ಶಿಗಳು, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಆಯೋಗ, ಬೆಂಗಳೂರು.
9) ಸಂಬಂಧಪಟ್ಟ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಸಹ ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿಗಳು.
10) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು.
11) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
12) ಸರ್ಕಾರದ ಉಪ ಕಾರ್ಯದರ್ಶಿಗಳು-3, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
13) ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಲೆಮಾರಿ ಜನಾಂಗದವರ ಅಭಿವೃದ್ಧಿ ಸಂಸ್ಥೆ, ನಂ40 1ನೇ ಮಹಡಿ, ತರಕಾರಿ ಮಾರ್ಕೆಟ್, ಗಂಗಾನಗರ ಮುಖ್ಯ ರಸ್ತೆ, ಬೆಂಗಳೂರು-32.
14) ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.

ಸಂಖ್ಯೆ ಹಿವಕ/ಆಡಳಿತ-1/ಸಿಆರ್-2/2012-13

ದಿನಾಂಕ: 2/11/2012

ಮಾಹಿತಿಗಾಗಿ:-

1) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರಿಗೆ
2) ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳು

ಆಯುಕ್ತರ ಪರವಾಗಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು